RNU AIR DHARWAD

MAY 06, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ರಾಜ್ಯದಲ್ಲಿ ಕ್ಯಾನ್ಸರ ಸೇರಿದಂತೆ, ವಿವಿಧ ಕಾಯಿಲೆಗಳ ಆರೈಕೆಗೆ ಸಂಬಂಧಿಸಿದಂತೆ ಪರಿಣಾಮಕಾರಿ ಆರೋಗ್ಯ ನೀತಿಗಳನ್ನು ರೂಪಿಸಲು ಸರ್ಕಾರದೊಂದಿಗೆ ಖಾಸಗಿ ಆಸ್ಟ್ರಜೆನೆಕಾ ಸಂಸ್ಥೆ ಉತ್ಸುಕವಾಗಿದೆ, ಈ ಕುರಿತು ಸುದೀರ್ಘ ಚರ್ಚೆ ನಡೆಸಲಾಗಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ದಿನೇಶ ಗುಂಡೂರಾವ್ ತಿಳಿಸಿದ್ದಾರೆ. ತಮ್ಮ ಎಕ್ಸ್ ಖಾತೆಯಲ್ಲಿ, ಆಸ್ಟ್ರಜೆನೆಕಾ ಕಂಪೆನಿಯ ಪ್ರಮುಖರೊಂದಿಗೆ, ಮಹತ್ವದ ಸಭೆ ನಡೆಸಿರುವ ಕುರಿತು ಮಾಹಿತಿ ಹಂಚಿಕೊಂಡಿರುವ ಸಚಿವರು, ರಾಜ್ಯದಲ್ಲಿ ಕಂಪನಿ ತನ್ನ ಹೂಡಿಕೆಯನ್ನು ವಿಸ್ತರಿಸುತ್ತಿರುವುದು ಹಾಗೂ ಆರೋಗ್ಯ ಕ್ಷೇತ್ರದಲ್ಲಿ ಸಹಕರಿಸುತ್ತಿರುವುದು ಸಂತಸದ ವಿಚಾರವಾಗಿದೆ ಎಂದಿದ್ದಾರೆ.

<><><>

ಬೆಂಗಳೂರು–ಮಂಗಳೂರು ಮಧ್ಯೆ ಹೊಸ ವಂದೇ ಭಾರತ ರೈಲು ಶೀಘ್ರದಲ್ಲಿ ಕಾರ್ಯಾರಂಭ ಮಾಡಲಿದೆ ಎಂದು ರೇಲ್ವೆ ಮತ್ತು ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಕ್ರಾಂತಿವೀರ ಸಂಗೊಳ್ಳಿ ರಾಯಣ್ಣ; ಕೆ.ಎಸ್.ಆರ್ ಬೆಂಗಳೂರು – ಮೈಸೂರು ರೈಲು ನಿಲ್ದಾಣದ ಮಧ್ಯೆ ಸಂಚರಿಸುವ, ಒಡೆಯರ್ ಎಕ್ಸಪ್ರೆಸ್ ರೈಲಿಗೆ ರಾಮನಗರಂ ರೈಲು ನಿಲ್ದಾಣದಲ್ಲಿ ಹೆಚ್ಚುವರಿ ನಿಲುಗಡೆಯ ನಿಶಾನೆ ತೋರಿ ಅವರು ಮಾತನಾಡಿದರು.

<><><>

ಕೇಂದ್ರ ಪುರಸ್ಕೃತ, ಪ್ರಧಾನಮಂತ್ರಿ ಕಿರು ಆಹಾರ ಉದ್ದಿಮೆಗಳ, ನಿಯಬದ್ಧಗೊಳಿಸುವಿಕೆ– ಪಿ.ಎಂ.ಎಫ್.ಎಂ.ಇ ಯೋಜನೆ, ಕಲಬುರಗಿ ರೊಟ್ಟಿ ಉದ್ಯಮಕ್ಕೆ ಹೊಸ ಕಾಯಕಲ್ಪ ನೀಡಿದೆ. ಈ ಯೋಜನೆಯ ಪ್ರಯೋಜನ ಪಡೆದು, ರೊಟ್ಟಿ ಉದ್ಯಮ ನಡೆಸುತ್ತಿರುವ ಚಿತ್ತಾಪುರದ ಶರಣಮ್ಮ, ದಿನವೊಂದಕ್ಕೆ 1 ಸಾವಿರ ರೊಟ್ಟಿ ತಯಾರಿಸಿ, ಸ್ವಂತ ಮಾರುಕಟ್ಟೆ ಸೃಷ್ಟಿಸಿಕೊಂಡಿದ್ದಾರೆ, ಪ್ರದೇಶ ಸಮಾಚಾರಕ್ಕಾಗಿ ಅವರು ತಮ್ಮ ಅನಿಸಿಕೆ ಹಂಚಿಕೊಂಡಿದ್ದಾರೆ.

<><><>

ಶರಣಮ್ಮ ಚಿತ್ತಾಪುರ ಧ್ವನಿ– 40 ಸೆಕೆಂದುಗಳು

<><><>

2026–27 ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ, ಕಬ್ಬು ಬೆಳೆಗಾರರಿಗೆ ಕಾರ್ಖಾನೆಗಳು ಪಾವತಿಸಬೇಕಾದ ಕನಿಷ್ಠ ಬೆಲೆಯನ್ನು ಕ್ವಿಂಟಲ್ ಗೆ 365 ರೂಪಾಯಿಗಳಿಗೆ ಹೆಚ್ಚಿಸಲು ಕೇಂದ್ರ ಸರ್ಕಾರ ನಿರ್ಧರಿಸಿದೆ ಎಂದು ಗ್ರಾಹಕ ವ್ಯವಹಾರಗಳ ಖಾತೆ ಸಚಿವ

ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಈ ಕುರಿತು, ತಮ್ಮ ಎಕ್ಸ್ ಖಾತೆಯಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಕೇಂದ್ರ ಸರ್ಕಾರದ ಮಹತ್ವದ ನಿರ್ಧಾರದಿಂದ ಒಟ್ಟು 5 ಕೋಟಿ ಕಬ್ಬು ಬೆಳೆಗಾರರಿಗೆ ಪ್ರಯೋಜನವಾಗಲಿದೆ, ಸಕ್ಕರೆ ಕಾರ್ಖಾನೆ ಹಾಗೂ ಉದ್ಯಮದ 5 ಲಕ್ಷ ಕಾರ್ಮಿಕರಿಗೆ ನೆರವಾಗಲಿದೆ ಎಂದಿದ್ದಾರೆ.

<><><>

ಗದಗ ತಾಲೂಕು, ಲಕ್ಕುಂಡಿ ಗ್ರಾಮದಲ್ಲಿ ನಡೆಯುತ್ತಿರುವ ಪ್ರಾಚ್ಯ ಅವಶೇಷಗಳ ಅನ್ವೇಷಣೆ ಅಭಿಯಾನದಲ್ಲಿ, ನಿನ್ನೆ 50 ಕ್ಕೂ ಹೆಚ್ಚಿನ ಪ್ರಾಚ್ಯಾವಶೇಷಗಳು ಪತ್ತೆಯಾಗಿವೆ. ಗ್ರಾಮದ ಜಂತ್ಲಿ –ಶಿರೂರ ರಸ್ತೆ ಬಳಿಯ ಹೊಲದಲ್ಲಿ ಪ್ರಾಚೀನ ಅವಶೇಷಗಳನ್ನು ಗುರುತಿಸಲಾಗಿದೆ.

<><><>

ರಾಜ್ಯದಲ್ಲಿ ಕಳೆದುಹೋದ ಬಿಜೆಪಿಯ ಶಕ್ತಿಯನ್ನು ವೃದ್ಧಿಸಿಕೊಂಡು, 2028 ರ ಚುನಾವಣೆಯಲ್ಲಿ ಪಕ್ಷವನ್ನು ಮತ್ತೆ ಅಧಿಕಾರಕ್ಕೆ ತರುವುದೇ ತಮ್ಮ ಮುಂದಿನ ಗುರಿಯಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು. ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ, ಪರಾಜಿತ ಬಿಜೆಪಿ ಅಭ್ಯರ್ಥಿ ಶ್ರೀನಿವಾಸ ದಾಸಕರಿಯಪ್ಪ ಅವರ ಮನೆಗೆ ಭೇಟಿ ನೀಡಿದ ಬಳಿಕ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಹಿರಿಯರ ಮಾರ್ಗದರ್ಶನದೊಂದಿಗೆ ರಾಜ್ಯಾದ್ಯಂತ ಪ್ರವಾಸ ಕೈಗೊಂಡು ಸಂಘಟನಾತ್ಮಕ ಹೋರಾಟ ರೂಪಿಸಲಾಗುವುದು ಎಂದರು.

<><><>

ಕಲಬುರಗಿ ಜಿಲ್ಲೆಯ ಸರ್ಕಾರಿ ಶಾಲೆಗಳು, ಈ ಬಾರಿ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಫಲಿತಾಂಶ ದಾಖಲಿಸುವ ಮೂಲಕ ಶಿಕ್ಷಣ ಕ್ಷೇತ್ರದಲ್ಲಿ ಹೊಸ ಮೈಲಿಗಲ್ಲು ಸ್ಥಾಪಿಸಿವೆ. ರಾಜ್ಯದಲ್ಲೇ ಅತಿ ಹೆಚ್ಚು ಸುಧಾರಣೆ ಕಂಡ ಎರಡನೇ ಜಿಲ್ಲೆಯಾಗಿ ಕಲಬುರಗಿ ಹೊರಹೊಮ್ಮಿದೆ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭಂವರ್ ಸಿಂಗ್ ಮೀನಾ ತಿಳಿಸಿದ್ದಾರೆ.

<><><>

ಬೆಳಗಾವಿ ಜಿಲ್ಲೆಯ ಎಲ್ಲ ಶಾಲೆಗಳಲ್ಲಿ, ಯೋಗ ಮತ್ತು ಆಯು ´ ಪದ್ಧತಿಗಳ ಬಲವರ್ಧನೆಗೊಳಿಸುವ ನಿಟ್ಟಿನಲ್ಲಿ, ಮಕ್ಕಳಿಗೆ ಸರಳ ಯೋಗಾಸನಗಳ ಅಭ್ಯಾಸ ಹಾಗೂ ಆಯು ´ ಗಿಡ ಮೂಲಿಕೆಗಳ ಬಗ್ಗೆಗಿನ ಮಾಹಿತಿ ಪ್ರಾತ್ಯಕ್ಷಿಕೆ ಆರಂಭಿಸಲಾಗುವುದು ಎಂದು ಜಿಲ್ಲಾ ಪಂಚಾಯತ ಸಿಇಓ ರಾಹುಲ್ ಶಿಂಧೆ ತಿಳಿಸಿದ್ದಾರೆ.

<><><>

ಕೊಡಗು ಜಿಲ್ಲೆ ಮಾದಾಪುರದಲ್ಲಿ, ನಿರ್ಮಾಣಗೊಂಡ ಕೊಡವ ಸಮಾಜದ ನೂತನ ಭವನವನ್ನು, ಹಾವೇರಿ ಸಂಸದ ಬಸವರಾಜ ಬೊಮ್ಮಾಯಿ ಲೋಕಾರ್ಪಣೆಗೊಳಿಸಿದರು.

<><><>

ರಾಮನಗರ ಜಿಲ್ಲೆ, ಕನಕಪುರ ತಾಲೂಕಿನಲ್ಲಿ ಅರ್ಹರಿಗೆ ಆಶ್ರಯ ಯೋಜನೆಯಡಿ ನಿವೇಶನ ಹಂಚಿಕೆ ಮಾಡುವಂತೆ, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ, ತಹಶೀಲ್ದಾರ ಸಂಜಯ್ ಅವರಿಗೆ ಸೂಚಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>